ನ-330-(39)

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎನ್.ರವಿಕುಮಾರ್ ಇವರು ನಿಯಮ 330ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರ ಹೇಳಿಕೆ**

**ಸೂಚನೆ:**

"ಬೆಂಗಳೂರು ನಗರ ದಕ್ಷಿಣ ತಾಲ್ಲೂಕಿನ ಬೇಗೂರು ಹೋಬಳಿಯ ಹುಳಿಮಾವು ಗ್ರಾಮದ ಸರ್ವೆ ನಂ.63ರಲ್ಲಿನ 5 ಎಕರೆ ಜಾಗವನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡು ಇಸ್ಲಾಮಿಯಾ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ತಾಂತ್ರಿಕ ಶಿಕ್ಷಣ ಸಂಸ್ಥೆಯನ್ನು ಪ್ರಾರಂಭಿಸುವ ಕುರಿತು ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ".

**ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರ ಉತ್ತರ:**

ಇಸ್ಲಾಮಿಯಾ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯು 1979 ರಲ್ಲಿ ಪ್ರಾರಂಭವಾಗಿದ್ದು, ಬೆಂಗಳೂರು ವಿಶ್ವವಿದ್ಯಾಲಯದ ಸಂಯೋಜನೆಗೆ ಒಳಪಟ್ಟಿರುತ್ತದೆ. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು 1998ರಲ್ಲಿ ಪ್ರಾರಂಭವಾಗಿದ್ದು ಎಲ್ಲಾ ತಾಂತ್ರಿಕ ಮಹಾವಿದ್ಯಾಲಯಗಳು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸಂಯೋಜನೆಗೆ ಒಳಪಟ್ಟಿರುತ್ತವೆ. ಇಸ್ಲಾಮಿಯಾ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ವಿರುದ್ಧ ಹಲವಾರು ದೂರುಗಳು ಬಂದಿದ್ದರಿಂದ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸ್ಥಳೀಯ ಪರಿಶೀಲನಾ ಸಮಿತಿಯು ಸ್ಥಳ ಪರಿವೀಕ್ಷಣೆ ಮಾಡಿ, ವರದಿ ನೀಡಿದ್ದರನ್ವಯ ಸದರಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲು, ಕಾರಣ ಕೇಳುವ ನೋಟೀಸ್ ಜಾರಿ ಮಾಡಿ ದಿನಾಂಕ:01.04.2002ರಂದು ಸದರಿ ಇಂಜನಿಯರಿಂಗ್ ಕಾಲೇಜಿಗೆ ನೀಡಿದ್ದ ಸಂಯೋಜನೆಯನ್ನು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ಹಿಂಪಡೆದಿರುತ್ತದೆ.

ಇಸ್ಲಾಮಿಕ್ ಮಿಷನ್ ಆಫ್ ಇಂಡಿಯಾ, ಬೆಂಗಳೂರು ಇವರು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯಕ್ಕೆ ಅರ್ಜಿ ಸಲ್ಲಿಸಿ 2004-05ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಇಸ್ಲಾಮಿಯಾ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯನ್ನು ಮುಂದುವರೆಸಲು ಸಂಯೋಜನೆಯನ್ನು ನೀಡಲು ಕೋರಿದ್ದು,

ಅದರಂತೆ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದವರು ವಿದ್ಯಾರ್ಥಿ ಪ್ರಮಾಣದೊಂದಿಗೆ **Computer Science & Engineering, Electronics & Communication Engineering, Civil Engineering, Mechanical Engineering** ಕೋರ್ಸುಗಳೊಂದಿಗೆ ಕಾಲೇಜನ್ನು ಪ್ರಾರಂಭಿಸಲು ದಿನಾಂಕ:28.07.2004ರಂದು ಪ್ರಸ್ತಾವನೆ ಸಲ್ಲಿಸಿದ್ದು, ಸದರಿ ಸಂಸ್ಥೆಯ ವತಿಯಿಂದ ಇಂಜಿನಿಯರಿಂಗ್ ಕಾಲೇಜನ್ನು ಮುಂದುವರೆಸಲು ರಾಜ್ಯ ಸರ್ಕಾರದ ಶಿಫಾರಸ್ಸನ್ನು ಎ.ಐ.ಸಿ.ಟಿ.ಇಗೆ ಕಳುಹಿಸಬೇಕಾಗಿರುವುದರಿಂದ ತಜ್ಞರ ಸಮಿತಿಯಿಂದ ತುರ್ತಾಗಿ ಸ್ಥಳ ಪರಿಶೀಲನೆ ಮಾಡಿಸಿ ತನಿಖಾ ವರದಿಯನ್ನು ಅಭಿಪ್ರಾಯದೊಂದಿಗೆ ವರದಿಯನ್ನು ಸಲ್ಲಿಸುವಂತೆ ದಿನಾಂಕ:11.08.2004ರ ಪತ್ರ ಸಂಖ್ಯೆ: ಇಡಿ 143 ಟಿಇಸಿ 2004ರಲ್ಲಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರನ್ನು ಕೋರಲಾಗಿತ್ತು.

ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ರಚಿಸಿದ್ದ ತ್ರಿಸದಸ್ಯ ಸಮಿತಿಯ ದಿನಾಂಕ:13.08.2004ರಂದು ಸದರಿ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ಮಾಡಿ ನೀಡಿರುವ ವರದಿಯನ್ನು ಪರಿಗಣಿಸಿ ದಿನಾಂಕ:15.09.2004ರ ಪತ್ರ ಸಂಖ್ಯೆ:ಇಡಿ 143 ಟಿಇಸಿ 2004ರಲ್ಲಿ ಈಗಾಗಲೇ ಸಂಯೋಜನೆ ನೀಡಿರುವ 4 ಸ್ನಾತಕ ಇಂಜಿನಿಯರಿಂಗ್ ಕೋರ್ಸುಗಳಿಗೆ ಸದರಿ ಇಂಜಿನಿಯರಿಂಗ್ ಕಾಲೇಜಿನ ಸಂಯೋಜನೆಯನ್ನು ಮುಂದುವರೆಸಲು ಎ.ಐ.ಸಿ.ಟಿ.ಇಗೆ ಶಿಫಾರಸ್ಸು ಮಾಡಿರುತ್ತದೆ.

ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಹುಳಿಮಾವು ಗ್ರಾಮದ ಸರ್ವೆ ನಂ.63ರ ಸರ್ಕಾರಿ ಜಮೀನನಲ್ಲಿರುವ 5 ಎಕರೆ ವಿಸ್ತೀರ್ಣದ ಅನಧಿಕೃತ ಜಮೀನನ್ನು ಸರ್ಕಾರದ ಸ್ವಾಧೀನಕ್ಕೆ ಪಡೆಯುವ ಬಗ್ಗೆ ತಹಶೀಲ್ದಾರ್ ನ್ಯಾಯಾಲಯ, ಬೆಂಗಳೂರು ದಕ್ಷಿಣ ತಾಲ್ಲೂಕು, ಕಂದಾಯ ಭವನ, ಬೆಂಗಳೂರು ಇದರ ಪ್ರಕರಣ ಸಂಖ್ಯೆ: ಎನ್.ಸಿ.ಆರ್/ಸಿ.ಆರ್/08/2009-10, ದಿನಾಂಕ:14.09.2020ರಲ್ಲಿ ಹೊರಡಿಸಿರುವ ಆದೇಶದಲ್ಲಿ ಇಸ್ಲಾಮಿಕ್ ಮಿಷನ್ ಆಫ್ ಇಂಡಿಯಾ ರವರು ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಹುಳಿಮಾವು ಗ್ರಾಮದ ಸರ್ವೆ ನಂ.63ರಲ್ಲಿ ಸರ್ಕಾರಿ ಜಮೀನನಲ್ಲಿ ಯಾವುದೇ ರೀತಿಯ ಮಂಜೂರಾತಿ ಪಡೆಯದ ಅಕ್ರಮ ಪ್ರವೇಶ ಮಾಡಿ ಕಟ್ಟಡಗಳನ್ನು ನಿರ್ಮಿಸಿದ್ದು, ಈ ಬಗ್ಗೆ ತೆರವುಗೊಳಿಸಲು ಸೂಚಿಸಿ ದಿನಾಂಕ:25.07.2009ರಂದು ತಿಳುವಳಿಕೆ ನೋಟೀಸ್ ನೀಡಿದ್ದು, ಒತ್ತುವರಿದಾರರು ಸಂಬಂಧಿಸಿದ ಯಾವುದೇ ಅಧಿಕೃತ ದಾಖಲೆಗಳನ್ನು ಸಲ್ಲಿಸಲು ವಿಫಲರಾಗಿರುತ್ತಾರೆ. ದಿನಾಂಕ:25.07.2009ರ

ನೋಟೀಸ್‌ನ ವಿರುದ್ಧ ಉಪ ವಿಭಾಗಾಧಿಕಾರಿಗಳು, ಮಾನ್ಯ ವಿಶೇಷ ಜಿಲ್ಲಾಧಿಕಾರಿಗಳು ಹಾಗೂ ಸರ್ಕಾರಕ್ಕೆ ಸಲ್ಲಿಸಿರುವ ಎಲ್ಲಾ ಮನವಿಗಳು ತಿರಸ್ಕೃತಗೊಂಡಿರುತ್ತವೆ. ಅಲ್ಲದೇ, ಇಸ್ಲಾಮಿಕ್ ಮಿಷನ್ ಆಫ್ ಇಂಡಿಯಾ ರವರು ಹುಳಿಮಾವು ಗ್ರಾಮದ ಸರ್ವೆ ನಂ.63ರಲ್ಲಿ ಅಕ್ರಮವಾಗಿ ಪ್ರವೇಶಿಸಿ ಇಸ್ಲಾಮಿಯಾ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಎಂಬ ಸಂಸ್ಥೆಯನ್ನು ಸ್ಥಾಪಿಸಿದ್ದು, ಇದು ಸಹ ಅಕ್ರಮವಾಗಿರುತ್ತದೆ.

ಆದ್ದರಿಂದ, ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 104ರನ್ವಯ ಮೇಲ್ಕಂಡ ಸಂಸ್ಥೆಯು ಹುಳಿಮಾವು ಗ್ರಾಮದ ಸರ್ವೆ ನಂ.63ರ ಸರ್ಕಾರಿ ಜಮೀನಿನಲ್ಲಿ ಅಕ್ರಮವಾಗಿ ಪ್ರವೇಶಿಸಿರುವುದನ್ನು ಕೂಡಲೇ ತೆರವುಗೊಳಿಸಿ ಅಲ್ಲಿ ನಿರ್ಮಾಣವಾಗಿರುವ ಅನಧಿಕೃತ ಕಟ್ಟಡಗಳನ್ನು ಮತ್ತು ಭೂಮಿಯನ್ನು ದಿನಾಂಕ:15.09.2020ರಂದು ಸರ್ಕಾರದ ಸ್ವಾಧಿನಕ್ಕೆ ಪಡೆಯಲು ಈ ಮೂಲಕ ಆದೇಶಿಸಿದೆ. ಇದಕ್ಕೆ ತಗಲುವ ವೆಚ್ಚವನ್ನು ಕರ್ನಾಟಕ ಭೂ ಕಂದಾಯ ಬಾಕಿ ಎಂಬುವುದಾಗಿ ಪರಿಗಣಿಸಿ ಒತ್ತುವರಿದಾರರಿಂದ ವಸೂಲಿ ಮಾಡಲು ಆದೇಶಿಸಿದೆ.

ಈ ಹಿನ್ನೆಲೆಯಲ್ಲಿ ಇಸ್ಲಾಮಿಯಾ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಗೆ ನೀಡಿರುವ ಸಂಯೋಜನೆಯನ್ನು ಮುಂದುವರೆಸುವ/ರದ್ದುಗೊಳಿಸುವ ಬಗ್ಗೆ ದಿನಾಂಕ:03-03-2021ರಂದು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಿಂದ ವರದಿಯನ್ನು ಕೋರಿದ್ದು, ವರದಿ ಬಂದ ನಂತರ ಸದರಿ ಇಂಜಿನಿಯರಿಂಗ್ ಕಾಲೇಜಿಗೆ 2021-22ನೇ ಶೈಕ್ಷಣಿಕ ಸಾಲಿನಿಂದ ಸಂಯೋಜನೆಯನ್ನು ಮುಂದುವರೆಸುವ/ರದ್ದುಗೊಳಿಸುವ ಬಗ್ಗೆ ನಿಯಮಾನುಸಾರ ಕ್ರಮ ಜರುಗಿಸಲಾಗುವುದು.

**ಇಡಿ 38 ಟಿಇಸಿ 2021**

(ಡಾ॥ ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು,
(ಉನ್ನತ ಶಿಕ್ಷಣ, ಐಟಿ&ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ).